# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 781 (853) |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16-12-2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಜೇಷ್ಠತಾ ಪಟ್ಟಿಯನ್ನು ಸಮಯೋಚಿತವಾಗಿ ಪ್ರಕಟಿಸುವಲ್ಲಿ ಮತ್ತು ಮುಂಬಡ್ತಿ ನೀಡುವಲ್ಲಿ ವಿಳಂಭ ವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಯಾವ ನಿಯಮಗಳ ಆಧಾರದಲ್ಲಿ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ, ಮುಂಬಡ್ತಿ ನೀಡಲಾಗುತ್ತದೆ. (ಆದೇಶದ ಪ್ರತಿಗಳನ್ನು ನೀಡುವುದು) | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಕರ್ನಾಟಕ ನಾಗರೀಕ ಸೇವಾ ( ಜೇಷ್ಠತೆ) ನಿಯಮಗಳು,1957 ರ ನಿಯಮ 10 ರಂತೆ ಜೇಷ್ಠತಾ ಪಟ್ಟಿಯನ್ನು ಕಾಲದಿಂದ ಕಾಲಕ್ಕೆ ಪ್ರಕಟಿಸಲಾಗುತ್ತಿದೆ ಹಾಗೂ ಹುದ್ದೆಗಳ ಖಾಲಿ ಆದಂತೆ ಅರ್ಹ ಸಿಬ್ಬಂದಿಗಳಿಗೆ ಮುಂಭಡ್ತಿಗಳನ್ನು ನೀಡಲಾಗುತ್ತಿದೆ.<br><br>2021ನೇ ಸಾಲಿನಿಂದ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿನಾಂಕ:10/12/2021 ಜಾರಿಗೆ ಬಂದಿದ್ದು, ಅದರಂತೆ ಹುದ್ದೆ ಆಧಾರಿತ ವರ್ಗೀಕರಣದ ಆಧಾರದ ಮೇಲೆ ಬಡ್ತಿಗೆ ಲಭ್ಯವಿರುವ ಹುದ್ದೆಗಳಿಗೆ ನಿಯಮಾನುಸಾರ ಬಡ್ತಿಯನ್ನು ನೀಡಲಾಗುತ್ತಿದೆ. |
| ಆ) | ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 106 ಸೇನೆನಿ 2021 ದಿನಾಂಕ:10-12-2021ರ ಆದೇಶದ ಅನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಆದೇಶವನ್ನು ಶಾಲಾ ಶಿಕ್ಷಣ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆಯೇ; (ಮಾಹಿತಿ ನೀಡುವುದು.) | |
| ಇ) | ಸದರಿ ಆದೇಶದೊಂದಿಗೆ ನೀಡಲಾದ ಅನುಬಂಧಗಳನ್ವಯ ಪ್ರತಿವರ್ಷವು ಡಿಸೆಂಬರ್ 31ಕ್ಕೆ ಅಂತ್ಯಗೊಂಡಂತೆ ಅಥವಾ ಜನವರಿ 1ಕ್ಕಿದ್ದಂತೆ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಸಿದ್ಧಪಡಿಸಿ, ಆಕ್ಷೇಪಣೆಗಳನ್ನು ಆಹ್ವಾನಿಸಿ, ಅವುಗಳನ್ನು ಪರಿಶೀಲಿಸಿ, ಮಾರ್ಚ್ 31ರ ಒಳಗಾಗಿ ಅಂತಿಮ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲಾಗುತ್ತಿದೆಯೇ; ಹಾಗಿದ್ದಲ್ಲಿ; ಬೋಧಕೇತರ ಹುದ್ದೆಗಳಾದ 'ಸಿ' ವೃಂದದ ಎಲ್ಲಾ ಹುದ್ದೆಗಳ ಪ್ರಸಕ್ತ | ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿನಾಂಕ:10/12/2021 ರ ಆದೇಶದೊಂದಿಗೆ ನೀಡಲಾಗಿರುವ ಅನುಬಂಧಗಳಂತೆ ಬೆಂಗಳೂರು, ಧಾರವಾಡ, ಕಲಬುರಗಿ ಆಯುಕ್ತಾಲಯಗಳ ವ್ಯಾಪ್ತಿಯಲ್ಲಿನ ವೃಂದಗಳಲ್ಲಿ ನೇರ ನೇಮಕಾತಿ ಮತ್ತು ಬಡ್ತಿ ಕೋಟಾಗಳಿರುವ ವೃಂದಗಳ ಹುದ್ದೆಗಳಿಗೆ ಸಂಬಂಧಪಟ್ಟಂತೆ ನಿಯಮಾನುಸಾರ ಹುದ್ದೆಗಳ ವರ್ಗೀಕರಣದ ಮಾಹಿತಿ ಸಹಿತವಾಗಿ ಜೇಷ್ಠತಾ ಪಟ್ಟಿಯನ್ನು ಇಲಾಖಾ ವೆಬ್ ಸೈಟ್ ಲ್ಲಿ ಪ್ರಕಟಿಸಲಾಗಿದೆ. |

| | | |
|---|---|---|
| | ಸಾಲಿನ ಜೇಷ್ಠತಾ ಪಟ್ಟಿಗಳನ್ನು ನೀಡುವುದು; (ಮಾಹಿತಿ ನೀಡುವುದು.) | |
| ಈ) | ಸದರಿ ಆದೇಶದನ್ವಯ ಜೇಷ್ಠತಾ ಪಟ್ಟಿಯನ್ನು ಡಿಸೆಂಬರ್ 31, 2023ರ ಅಂತ್ಯಕ್ಕಿದ್ದಂತೆ ಪ್ರಕಟಿಸದಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಸದರಿ ಆದೇಶದನ್ವಯ ಡಿಸೆಂಬರ್ 31, 2024ರ ಅಂತ್ಯಕ್ಕಿದ್ದಂತೆ ಅಥವಾ ಜನವರಿ 1 ಕ್ಕಿದ್ದಂತೆ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸುವ ಕುರಿತು ಸರ್ಕಾರದ ನಿಲುವೇನು? (ಸಂಪೂರ್ಣ ಮಾಹಿತಿ ನೀಡುವುದು. | ಕ್ರಮ ಸಂಖ್ಯೆ : (ಇ) ರ ಹಿನ್ನೆಲೆಯಲ್ಲಿ ಪ್ರಶ್ನೆ ಉದ್ಭವವಾಗುವುದಿಲ್ಲ. |

ಸಂಖ್ಯೆ:ಇಪಿ 500 ಎಸ್ ಟಿಬಿ 2024

( ಎಸ್. ಮಧು ಬಂಗಾರಪ್ಪ )
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.